ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿಯ, ದಿನಾಂಕ:17-07-2019ರ ನಡವಳಿಗಳು

ವಿಷಯದ ಸಂಖ್ಯೆ: ವಾಕಾಸ್ಥಾಸ/84/2019-20

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಾಸರಹಳ್ಳಿ ವಲಯಕ್ಕೆ ಸೇರಿರುವ ವಾರ್ಡ್-12ಕ್ಕೆ 2017-18ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ ಪಿ-1808(construction of ward office) ಅಡಿಯಲ್ಲಿ ಪ್ರಸ್ತಾಪಿತ ಕಾಮಗಾರಿಯ ಜಾಬ್ ಕೋಡ್ ಪಡೆದಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತದೆ.

ಕ್ರ.ಸ	ಕಾಮಗಾರಿ ಹೆಸರು	ಅಂದಾಜು ಮೊತ್ತ ರೂ ಲಕ್ಷಗಳಲ್ಲಿ	ಜಾಬ್ ಸಂಖ್ಯೆ
1.	Construction of ward office Bangalore one library and help line multipurpose building in Abbigere in ward No.12 Shettyhalli	150.00	012-18-000001

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶೆಟ್ಟಿಹಳ್ಳಿ ಉಪ ವಿಭಾಗದ ಶೆಟ್ಟಿಹಳ್ಳಿ ವಾರ್ಡ್‌ನ ವ್ಯಾಪ್ತಿಯ ಅಬ್ಬಿಗೆರೆಯಲ್ಲಿ ವಾರ್ಡ್ ಕಛೇರಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲು ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ ದಿನಾಂಕ:03-11-2018 ರಂದು ಟೆಂಡರ್ ಪ್ರಕಟಣೆ ಸಂಖ್ಯೆ:03/2018-19 ರಲ್ಲಿ ಟೆಂಡರ್ ಕರೆದಿದ್ದು, ಸದರಿ ಟೆಂಡರನಲ್ಲಿ ಭಾಗವಹಿಸಿರುವ ಗುತ್ತಿಗೆದಾರರು ತಾಂತ್ರಿಕವಾಗಿ ಅನರ್ಹವಾಗಿದ್ದು, ಮುಖ್ಯ ಅಭಿಯಂತರರು (ದಾಸರಹಳ್ಳಿ) ರವರ ಆದೇಶದಂತೆ ಟೆಂಡರ್ ರದ್ದುಪಡಿಸಿ, ತದನಂತರ ದಿನಾಂಕ:30/4/2019 ರಂದು ಟೆಂಡರ್ ಪ್ರಕಟಣೆ ಸಂಖ್ಯೆ:01/2019-20ರಲ್ಲಿ 2ನೇ ಬಾರಿಗೆ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲೂ ಸಹ ಯಾವುದೇ ಗುತ್ತಿಗೆದಾರರು ಭಾಗವಹಿಸಿರುವುದಿಲ್ಲ. ಮುಖ್ಯ ಅಭಿಯಂತರರು(ದಾಸರಹಳ್ಳಿ ವಲಯ) ರವರು ಟೆಂಡರ್‌ನ್ನು ರದ್ದುಪಡಿಸಿ ಮರು ಟೆಂಡರ್ ಕರೆಯಲು ಸೂಚಿಸಿರುತ್ತಾರೆ.

ಮುಂದುವರೆದು, ಶ್ರೀ.ಕೆ.ನಾಗಭೂಷಣ್ ರವರು ಮಾನ್ಯ ಪಾಲಿಕೆ ಸದಸ್ಯರು ರವರು ದಿನಾಂಕ:14/6/2019ರಂದು ಮುಖ್ಯ ಅಭಿಯಂತರರು (ದಾಸರಹಳ್ಳಿ) ರವರಿಗೆ ಪತ್ರ ಬರೆದು ಸದರಿ ಕಾಮಗಾರಿಯು ಅತ್ಯವಶ್ಯಕವಾಗಿದ್ದು, ಸದರಿ ಕಾಮಗಾರಿಯ ಅನುದಾನವು 2017-18ನೇ ಸಾಲಿನದಾಗಿದ್ದು, ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ 2ನೇ ಭಾರಿಗೆ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲೂ ಸಹ ಯಾವುದೇ ಗುತ್ತಿಗೆದಾರರು ಭಾಗವಹಿಸಿರುವುದಿಲ್ಲ. ಆದ್ದರಿಂದ ವಾರ್ಡನ ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಮುಖಾಂತರ ನಿರ್ವಹಿಸಲು ಕೋರಿದ್ದು, ಮುಖ್ಯ ಅಭಿಯಂತರರು (ದಾಸರಹಳ್ಳಿ) ರವರು ಪ್ರಸ್ತಾಪಿತ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಮುಖಾಂತರ ನಿರ್ವಹಿಸಲು ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಮಾನ್ಯ ಆಯುಕ್ತರು ರವರು ಪ್ರಸ್ತಾವನೆ ಅನುಮೋದನೆ ಕೋರಿ ಸ್ಥಾಯಿ ಸಮಿತಿ ಮುಂದೆ ಟಿಪ್ಪಣಿಯೊಂದಿಗೆ ಮಂಡಿಸಲು ಒಪ್ಪಿಗೆ ನೀಡಿರುತ್ತಾರೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣೆ ಕೋಶ) ಆದೇಶ ಸಂಖ್ಯೆ:ಆಇ/541/ವೆಚ್ಚ-12/2019, ದಿನಾಂಕ:29-05-2019 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆಆರ್‌ಐಡಿಎಲ್) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2019-20ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ಕಛೇರಿ ಟಿಪ್ಪಣಿ ಸಂಖ್ಯೆ:673/2019-20, ದಿನಾಂಕ;10-06-2019ರಂತೆ ಪಾಲಿಕೆಯ ವತಿಯಿಂದ 2019-20ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನದ ಕಾಮಗಾರಿಗಳನ್ನು (ರಾಜ್ಯ ಹಣಕಾಸು ಆಯೋಗದ ಅನುದಾನ, 14ನೇ ಹಣಕಾಸು ಆಯೋಗದ ಅನುದಾನ, ಸ್ವಚ್ಚ ಭಾರತ್ ಮತ್ತು ಘನ ಸರ್ಕಾರದ ಅನುಮೋದಿತ ಕಾಮಗಾರಿಗಳನ್ನು ಹೊರತುಪಡಿಸಿ) ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆರವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ:ಕೆ.ಆರ್.ಐ.ಡಿ.ಎಲ್. ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಪತ್ರದ ಸಂಖ್ಯೆ:ನಅಇ/497/ಎಂ.ಎನ್.ವೈ 2016 (ಭಾಗ-1) ದಿನಾಂಕ:07-07-2017 ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ವತಿಯಿಂದ (performance security)

ಪಡೆಯಲು ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ/4/ಪಿ.ಸಿ.ಎಲ್./2008, ದಿನಾಂಕ:14/10/2008 ರಂತೆ ಕ್ರಮ ತೆಗೆದುಕೊಳ್ಳಲು ಆದೇಶ ನೀಡಿರುವ ಮೇರೆಗೆ ಮತ್ತು ಈ ವಿಚಾರದಲ್ಲಿ ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರು ಟಿಪ್ಪಣಿ ಸಂಖ್ಯೆ:6282/2018-19, ದಿನಾಂಕ:16-01-2019 ರಲ್ಲಿ ಕಾಮಗಾರಿಗಳಿಗೆ ಕರಾರು ಪತ್ರದಲ್ಲಿ ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಮಾನ್ಯ ಆಯುಕ್ತರವರ ಆದೇಶದಂತೆ ವಾರ್ಡ್-12 ರಲ್ಲಿ ಪ್ರಸ್ತಾಪಿತ Construction of ward office Bangalore one library and help line multipurpose building in Abbigere in ward No.12 Shettyhalli ಕಾಮಗಾರಿಯಾದ ಅನುಷ್ಠಾನಗೊಳಿಸಲು ಮೆ:ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸಿಕೊಡಲು ಹಾಗೂ ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ:150.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಬಗ್ಗೆ ಸೂಕ್ತ ನಿರ್ಣಯ ಕೋರಿ ಸಮಿತಿಯ ಮುಂದೆ ಮಂಡಿಸಲು ಮಾನ್ಯ ಆಯುಕ್ತರು ಸಂಖ್ಯೆ:ಪಿ.ಎಸ್.ಆರ್.(ಜಿ)954/2019-20, ದಿನಾಂಕ:25-06-2019 ರಂತೆ ಅನುಮೋದಿಸಿರುವ ಮೇರೆಗೆ ಪ್ರಧಾನ ಅಭಿಯಂತರರ ಕಛೇರಿ ಸಂಖ್ಯೆ:1940/2019-20, ದಿನಾಂಕ:03-07-2019 ರಂತೆ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಮುಂದೆ ಮಂಡಿಸಿರುವ ಪ್ರಧಾನ ಅಭಿಯಂತರರವರ ದಿನಾಂಕ:03-07-2019ರ ಟಿಪ್ಪಣಿ.

ನಿರ್ಣಯ:- ಪ್ರಧಾನ ಅಭಿಯಂತರವರ ದಿ|03|07|19 ರ ಟಿಪ್ಪಣಿಯಲ್ಲಿ ಪ್ರಸ್ತಾಪಿಸಿರುವ ಕಾಮಗಾರಿಯ ಪ್ರಸ್ತಾವನೆಯ ಪ್ರಯೋಜನೆಯನ್ನು ವಿವರಿಸಿದ್ದು, ಮೆ:ಕೆ.ಆರ್.ಐ.ಡಿ.ಎಲ್. ವತಿಯಿಂದ ಕಾಮಗಾರಿ ಕೈಗೊಳ್ಳುವ ಕುರಿತು ಅಭಿಕಾರಿಗಳಿಗೆ ಇಚ್ಛೆಗಿತ್ತಿಸಲಾಯಿತು, ತದನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಅವಶ್ಯಕತೆ ಇರುವುದಾಗಿ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ, ಪ್ರಸ್ತಾವಿತ ಕಾಮಗಾರಿಯನ್ನು ಮೆ: ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ವತಿಯಿಂದ ಕೈಗೊಳ್ಳಲು ನಿಯಮಾನುಸಾರ ಅಯುಕ್ತರು ಕೈಗೊಳ್ಳುವುದೆಂದು ಸಮಿತಿಯು ತೀರ್ಮಾನಿಸಿತು.

ಅಧ್ಯಕ್ಷರು

ವಾರ್ಡ್‌ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ

ನಿರ್ಣಯದ ಪ್ರಕಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಕ್ರ ಸಂ	ಶ್ರೀಯುತರ ಹೆಸರು	ಪದನಾಮ
1	ಉಮೇಸಲ್ಮಾ	ಅಧ್ಯಕ್ಷರು
2	ದೀಪಿಕಾ.ಎಲ್.ಮಂಜುನಾಥರೆಡ್ಡಿ	ಸದಸ್ಯರು
3	ಎಂ.ಶಾಮಲ	ಸದಸ್ಯರು
4	ಇಂದಿರಾ.ಜಿ	ಸದಸ್ಯರು
5	ಜಯಲಕ್ಷ್ಮಮ್ಮ ಪಿಳ್ಳಪ್ಪ	ಸದಸ್ಯರು
6	ಶ್ರೀಲತ ಸಿ.ಜಿ.ಗೋಪಿನಾಥರಾಜು	ಸದಸ್ಯರು
7	ಕೆ.ದೇವದಾಸ	ಸದಸ್ಯರು
8	ನೇತ್ರಾವತಿ ಕೃಷ್ಣೇಗೌಡ	ಸದಸ್ಯರು
9	ಶಿಲ್ಪ ಅಭಿಲಾಶ್	ಸದಸ್ಯರು
10	ಎನ್.ಮಂಜುನಾಥ್	ಸದಸ್ಯರು
11	ಆರ್.ಪದ್ಮಾವತಿ ಅಮರನಾಥ್	ಸದಸ್ಯರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಿಷಯ :- ಪಾಲಿಕೆ ವ್ಯಾಪ್ತಿಯಲ್ಲಿ ಬರುವ ದಾಸರಹಳ್ಳಿ ವಲಯದ ವಾರ್ಡ್ ನಂ:12 ರಲ್ಲಿನ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆರವರಿಗೆ ವಹಿಸಿಕೊಡುವ ಬಗ್ಗೆ.

ಉಲ್ಲೇಖ :- ಮಾನ್ಯ ಆಯುಕ್ತರು ರವರ ಆದೇಶ ನಂ:ಪಿಎಸ್ಆರ್(ಜಿ)/ 954 /2019-20, ದಿನಾಂಕ:25/6/19

--*-*-*-*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಾಸರಹಳ್ಳಿ ವಲಯಕ್ಕೆ ಸೇರಿರುವ ವಾರ್ಡ್ ನಂ:12 ಕ್ಕೆ 2017-18ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ ಪಿ-1808 (Construction of Ward Office) ರ ಅಡಿ ಪ್ರಸ್ತಾಪಿತ ಕಾಮಗಾರಿಯ ಜಾಬ್ ಕೋಡ್ ಪಡೆದಿದ್ದು, ವಿವರಗಳು ಈ ಕೆಳಕಂಡಂತಿರುತ್ತದೆ.

SL No	Name of work	Job Code No	Est Cost (Rs. in Lakhs)
1	Construction of ward office Bangalore One library and help line multipurpose building in Abbigere in Ward No.12 Shettyhalli.	012-18-000001	150.00

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಶೆಟ್ಟಿಹಳ್ಳಿ ಉಪ-ವಿಭಾಗದ ಶೆಟ್ಟಿಹಳ್ಳಿ ವಾರ್ಡ್‌ನ ವ್ಯಾಪ್ತಿಯ ಅಬ್ಬಿಗೆರೆಯಲ್ಲಿ ವಾರ್ಡ್ ಕಛೇರಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲು ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ:03/11/2018 ರಂದು ಟೆಂಡರ್ ಪ್ರಕಟಣೆ ಸಂಖ್ಯೆ:03/18-19 ರಲ್ಲಿ ಟೆಂಡರ್ ಕರೆದಿದ್ದು, ಸದರಿ ಟೆಂಡರ್‌ನಲ್ಲಿ ಭಾಗವಹಿಸಿರುವ ಗುತ್ತಿಗೆದಾರರು ತಾಂತ್ರಿಕವಾಗಿ ಅನರ್ಹವಾಗಿದ್ದು, ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ) ರವರ ಆದೇಶದಂತೆ, ಟೆಂಡರ್ ರದ್ದುಪಡಿಸಿ, ತದನಂತರ ದಿನಾಂಕ:30/04/2019 ರಂದು ಟೆಂಡರ್ ಪ್ರಕಟಣೆ ಸಂಖ್ಯೆ:01/19-20 ರಲ್ಲಿ ಎರಡನೇ ಬಾರಿಗೆ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲೂ ಸಹ ಯಾವುದೇ ಗುತ್ತಿಗೆದಾರರು ಭಾಗವಹಿಸಿರುವುದಿಲ್ಲ, ಕಂಡಿಕೆ (159) ರಲ್ಲಿ ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ) ರವರು ಟೆಂಡರ್ ಅನ್ನು ರದ್ದುಪಡಿಸಿ ಮರು ಟೆಂಡರ್ ಕರೆಯಲು ಸೂಚಿಸಿರುತ್ತಾರೆ.

ಮುಂದುವರೆದು, ಶ್ರೀ.ಕೆ.ನಾಗಭೂಷಣ್ ರವರು ಮಾನ್ಯ ಪಾಲಿಕೆ ಸದಸ್ಯರು ರವರು ದಿನಾಂಕ:14/06/2019 ರಂದು ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ) ರವರಿಗೆ ಪತ್ರ ಬರೆದು ಸದರಿ ಕಾಮಗಾರಿಯು ಅತ್ಯವಶ್ಯಕವಾಗಿದ್ದು, ಸದರಿ ಕಾಮಗಾರಿಯ ಅನುದಾನವು 2017-18ನೇ ಸಾಲಿನದಾಗಿದ್ದು, ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಎರಡನೇ ಬಾರಿಗೆ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲೂ ಸಹ ಯಾವುದೇ ಗುತ್ತಿಗೆದಾರರು ಭಾಗವಹಿಸಿರುವುದಿಲ್ಲ, ಆದ್ದರಿಂದ ವಾರ್ಡ್‌ನ ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮುಖಾಂತರ ನಿರ್ವಹಿಸಿಲು ಕೋರಿದ್ದು, ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ) ರವರು ಪ್ರಸ್ತಾಪಿತ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ಮುಖಾಂತರ ನಿರ್ವಹಿಸಲು ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದು, (ಮೇಲ್ಕಂಡ ಉಲ್ಲೇಖದಡಿಯಲ್ಲಿ) ಮಾನ್ಯ ಆಯುಕ್ತರು ರವರು ಪ್ರಸ್ತಾವನೆಯ ಅನುಮೋದನೆ ಕೋರಿ ಸ್ಥಾಯಿ ಸಮಿತಿಯ ಮುಂದೆ ಟಿಪ್ಪಣಿಯೊಂದಿಗೆ ಮಂಡಿಸಲು ಒಪ್ಪಿಗೆ ನೀಡಿರುತ್ತಾರೆ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ (ಸಂಗ್ರಹಣ ಕೋಶ) ಆದೇಶ ಸಂಖ್ಯೆ:ಆಇ/541/ವೆಚ್ಚ-12/2019, ದಿನಾಂಕ:29/05/2019 ರಲ್ಲಿ ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಕರ್ನಾಟಕ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆ.ಆರ್.ಐ.ಡಿ.ಎಲ್) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ 2019-20ನೇ ಸಾಲಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ. ಈ ವಿಚಾರದಲ್ಲಿ ಮಾನ್ಯ ಆಯುಕ್ತರು ರವರ ಕಛೇರಿ ಟಿಪ್ಪಣಿ ಸಂಖ್ಯೆ:673/2019-20, ದಿನಾಂಕ:10/06/2019 ರಂತೆ ಪಾಲಿಕೆಯ ವತಿಯಿಂದ 2019-20ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ನಿಗಧಿ ಪಡಿಸಿದ ಅನುದಾನದ ಕಾಮಗಾರಿಗಳನ್ನು (ರಾಜ್ಯ ಹಣಕಾಸು ಆಯೋಗದ ಅನುದಾನ, 14ನೇ ಹಣಕಾಸು ಆಯೋಗದ ಅನುದಾನ, ಸ್ವಚ್ ಭಾರತ್ ಮತ್ತು ಘನ ಸರ್ಕಾರದ ಅನುಮೋದಿತ ಕಾಮಗಾರಿಗಳನ್ನು ಹೊರತುಪಡಿಸಿ) ಸಂಬಂಧಪಟ್ಟ ಸ್ಥಾಯಿ ಸಮಿತಿ ಅನುಮೋದನೆ ಪಡೆದು ತದನಂತರ ಸರ್ಕಾರದ ಆರ್ಥಿಕ ಇಲಾಖೆಯವರು ನೀಡಿರುವ ಷರತ್ತುಗಳಿಗೆ ನಿಯಮಾನುಸಾರವಾಗಿ ಕ್ರಮವಹಿಸಿ ಮೆ॥ಕೆ.ಆರ್.ಐ.ಡಿ.ಎಲ್ ಮುಖಾಂತರ ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.

.....2/

ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಪತ್ರ ಸಂಖ್ಯೆ:ನಅಇ/497/ಎಂ.ಎನ್.ಪೈ2016(ಭಾಗ-1), ದಿನಾಂಕ:07/07/2017 ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಯ ವತಿಯಿಂದ Performance Security ಪಡೆಯಲು ಸರ್ಕಾರದ ಆದೇಶ ಸಂಖ್ಯೆ:FD/4/PCL/2008, ದಿನಾಂಕ:14/10/2008 ರಂತೆ ಕ್ರಮ ತೆಗೆದುಕೊಳ್ಳಲು ಆದೇಶ ನೀಡಿರುವ ಮೇರೆಗೆ ಮತ್ತು ಈ ವಿಚಾರದಲ್ಲಿ ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರು ಟಿಪ್ಪಣಿ ಸಂಖ್ಯೆ:6282/2018-19, ದಿನಾಂಕ:16/01/2019 ರಲ್ಲಿ ಕಾಮಗಾರಿಗಳಿಗೆ ಕರಾರು ಪತ್ರದಲ್ಲಿ ಅಳವಡಿಸಿಕೊಳ್ಳಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ಮಾನ್ಯ ಆಯುಕ್ತರು ರವರು ಆದೇಶಿಸಿದಂತೆ, ವಾರ್ಡ್ ನಂ:12 ರಲ್ಲಿ ಪ್ರಸ್ತಾಪಿತ ಕಾಮಗಾರಿಯಾದ Construction of ward office Bangalore One library and help line multipurpose building in Abbigere in Ward No.12 Shettyhalli ಅನುಷ್ಠಾನಗೊಳಿಸಲು ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ವಹಿಸಿಕೊಡಲು ಹಾಗೂ ಸದರಿ ಕಾಮಗಾರಿಯ ಅಂದಾಜು ಮೊತ್ತವಾದ ರೂ.150.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಬಗ್ಗೆ ಸೂಕ್ತ ನಿರ್ಣಯ ಕೋರಿ ಮಂಡಿಸಲಾದ ಟಿಪ್ಪಣಿ.

ಪ್ರಧಾನ ಅಭಿಯಂತರರು (ಪ್ರಭಾರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.